ಇ) ಜಿಲ್ಲಾ ನ್ಯಾಯಾಲಯ ಹಾಗೂ ಸಿವಿಲ್ ನ್ಯಾಯಾಲಯಗಳನ್ನು ಎಂದು ಸ್ಥಾಪಿಸಲಾಗುವುದು?

ಶ್ರೀ ಡಿ. ಬಿ. ಚಂದ್ರೇಗೌಡ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆಗಳ ಸಚಿವರು) :

ಅ) ಹಾವೇರಿಯಲ್ಲಿ ಜಿಲ್ಲಾ ನ್ಯಾಯಾಲಯದ ಸ್ಥಾಪನೆಗೆ ಸ್ಥಳ ಲಭ್ಯವಿದೆ ಎಂದು ಉಚ್ಚ ನ್ಯಾಯಾಲಯವು ವರದಿ ಮಾಡಿರುವುದನ್ನು ಆಧರಿಸಿ ಹಾವೇರಿಯಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಸ್ಥಾಪಿಸಲು ಮತ್ತು ಅಗತ್ಯವಾದ ಸಿಬ್ಬಂದಿ ಹುದ್ದೆಗಳ ಸೃಜನೆಗೆ ದಿನಾಂಕ 2-12-99ರ ಸಂಖ್ಯೆ ಲಾ 18 ಎಲ್‌ಸಿಇ 97ರ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಆ) ಇದು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಅದಷ್ಟು ತ್ವರಿತವಾಗಿ ಪ್ರಾರಂಭಿಸಲಾಗುವುದು.

ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಹೊಸ ಪಶುವೈದ್ಯ ಆಸ್ಪತ್ರೆಗಳು

1285 (1683) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) : ಮಾನ್ಯ ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಎಷ್ಟು ಪಶುಚಿಕಿತ್ಸಾ ಘಟಕಗಳನ್ನು ಪಶುಚಿಕಿತ್ಸಾಲಯ ಗಳನ್ನಾಗಿ ಮೇಲ್ದರ್ಜೆಗೆ ಏರಿಸಲು ಕ್ರಮ ಕೈಗೊಳ್ಳಲಾಗಿದೆ, ಅವುಗಳು ಯಾವುವು?

ಆ) ಹೊಸದಾಗಿ ಮಂಜೂರಾದ ಪಶುವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು? ಅವುಗಳು ಯಾವುವು?

ಇ) ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ಸಂಖ್ಯೆ : ಎಷ್ಟು ಇವುಗಳಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನಾ ಹಾಗೂ ಸಕ್ಕರೆ ಸಚಿವರು) :

ಅ) 1999-2000ರಲ್ಲಿ ಯಾವುದೂ ಇಲ್ಲ.

ಆ) 1999-2000ರಲ್ಲಿ ಯಾವುದೂ ಇಲ್ಲ.

ಇ) ಯಾವುದೂ ಇಲ್ಲ.

ಈ) ಉದ್ಭವಿಸುವುದಿಲ್ಲ.

ಗುಂಡ್ಲು ಪೇಟೆ ಪಟ್ಟಣದಲ್ಲಿ ಬೈಪಾಸ್ ರಸ್ತೆ ನಿರ್ಮಾಣ.

1286 (1659) ಶ್ರೀ ಮಹದೇವ ಪ್ರಸಾದ್ ಹೆಚ್. ಎಸ್ (ಗುಂಡ್ಲುಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಷ್ಟ್ರೀಯ ಹೆದ್ದಾರಿ ಸಂಖ್ಯೆ-212 ಎಷ್ಟು ಕಿ.ಮೀ. ಉದ್ದ ಇದೆ; ಇದರ ಅಭಿವೃದ್ಧಿಗೆ ಈ ಸಾಲಿನಲ್ಲಿ ಎಷ್ಟು ಹಣ ಒದಗಿಸಲಾಗಿದೆ.

ಆ) ಕಾಮಗಾರಿಯನ್ನು ಯಾವ ಭಾಗದಲ್ಲಿ ಕೈಗೊಳ್ಳಲಾಗಿದೆ.

ಇ) ಈ ಹೆದ್ದಾರಿ ಹಾದು ಹೋಗುವ ಗುಂಡ್ಲುಪೇಟೆ ಪಟ್ಟಣದ ಬಳಿ ಬೈಪಾಸ್ ರಸ್ತೆ ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ರಾಷ್ಟ್ರೀಯ ಹೆದ್ದಾರಿ ಸಂಖ್ಯೆ-212ರ ಒಟ್ಟು ಉದ್ದ 267.00 ಕಿ.ಮೀ. ಇದ್ದು, ಕರ್ನಾಟಕ ರಾಜ್ಯದಲ್ಲಿ 150.00 ಕಿ.ಮೀ ಉದ್ದ ಇರುತ್ತದೆ. 1999-2000ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಸದರಿ ಹೆದ್ದಾರಿಯ ಭಾಗದ ಅಭಿವೃದ್ಧಿಗೆ ರೂ. 1.68 ಕೋಟಿಗಳನ್ನು ಒದಗಿಸಲಾಗಿದೆ.

ಆ) ಅಭಿವೃದ್ಧಿ ಕಾಮಗಾರಿಯನ್ನು ಕಿ.ಮೀ 86 ರಿಂದ 91ರ ವರೆಗೆ ಮತ್ತು ಕಿ.ಮೀ 219 ರಿಂದ 234ನೇ ಭಾಗದಲ್ಲಿ ಕೈಗೊಳ್ಳಲಾಗಿದೆ.

ಇ) ಪ್ರಸ್ತುತ ಇಂತಹ ಪ್ರಸ್ತಾವನೆ ಇರುವುದಿಲ್ಲ.

ಗುಂಡ್ಲು ಪೇಟೆ ತಾಲ್ಲೂಕು ಬರಗಿ ಘೋಷಣೆ.

1288 (1660) ಶ್ರೀ ಮಹದೇವಪ್ರಸಾದ್. ಹೆಚ್.ಎಸ್ (ಗುಂಡ್ಲಪೇಟೆ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಗುಂಡ್ಲುಪೇಟೆ ತಾಲ್ಲೂಕು ಬರ್ಗಿ ಘೋಷಣೆಗೆ ಸೇರಿದ ಸುಮಾರು 250 ಎಕರೆ ಪ್ರದೇಶವನ್ನು ಪಶು ಸಂಗೋಪನೆ ಇಲಾಖೆಯಿಂದ ಅರಣ್ಯ ಇಲಾಖೆಗೆ ವರ್ಗಾಯಿಸಲಾಗಿದೆಯೇ?

ಆ) ಅರಣ್ಯ(ವನ್ಯ ಜೀವಿ) ವಿಭಾಗದವರು ಈ ಪ್ರದೇಶದಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳೇನು?

ಇ) ಈ ವರೆವಿಗೆ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಕೆ.ಎಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ತರೀಕೆರೆ ತಾಲ್ಲೂಕಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರ ಮಂಜೂರಾತಿ

1290 (1656) ಶ್ರೀ ನೀಲಕಂಠಪ್ಪ ಬಿ. ಆರ್ (ತರೀಕೆರೆ) : ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?